# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 264
ಸದಸ್ಯರ ಹೆಸರು : ಶ್ರೀ ಎಂ.ನಾಗರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 10-12-2024
ಉತ್ತರಿಸುವ ಸಚಿವರು : ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಐದು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಸ್ಮಾರ್ಟ್ ಸಿಟಿ ಯೋಜನೆಯು ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೇಂದ್ರ ಹಾಗೂ ರಾಜ್ಯ ಸರ್ಕಾರ ಪ್ರಾಯೋಜಿತ ಸ್ಮಾರ್ಟ್ ಸಿಟಿ ಅಭಿಯಾನವು ಜೂನ್-2015 ರಂದು ಆರಂಭವಾಗಿದ್ದು, ಅಭಿಯಾನದಡಿ ರಾಜ್ಯದ 7 ನಗರಗಳಾದ ಬೆಳಗಾವಿ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಬೆಂಗಳೂರು ನಗರಗಳು ಆಯ್ಕೆಯಾಗಿರುತ್ತವೆ.<br>ಸ್ಮಾರ್ಟ್ ಸಿಟಿ ಅಭಿಯಾನದಡಿ 7 ನಗರಗಳಲ್ಲಿ ಸ್ಮಾರ್ಟ್ ಸಿಟಿ ಅನುದಾನ ಹಾಗೂ ಪಿಪಿಪಿ ಮಾದರಿಯಡಿ ಒಟ್ಟು 690 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಒಟ್ಟು ಕಾಮಗಾರಿಗಳ ಪೈಕಿ 631 (ಶೇಕಡ 91)ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಉಳಿದ 58 (ಶೇಕಡ 9) ಕಾಮಗಾರಿಗಳನ್ನು ಸ್ಮಾರ್ಟ್ ಸಿಟಿ ಯೋಜನಾ ಅವಧಿಯಾದ ಮಾರ್ಚ್ 2025ರ ಒಳಗಾಗಿ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಲಾಗಿದೆ.<br>ಮುಂದುವರೆದು, ಸ್ಮಾರ್ಟ್ ಸಿಟಿ ಯೋಜನೆಯ ಅನುಷ್ಠಾನದಲ್ಲಿ ಕರ್ನಾಟಕ ರಾಜ್ಯವು ಮೂರನೇ ಸ್ಥಾನದಲ್ಲಿರುತ್ತದೆ. |
| ಆ) | ಬಂದಿದ್ದಲ್ಲಿ, ಕೈಗೊಂಡಿರುವ ಸ್ಮಾರ್ಟ್ ಸಿಟಿ ಯೋಜನೆಗಳಲ್ಲಿ ಬಹುತೇಕ ಯೋಜನೆಗಳು ಇನ್ನೂ ಟೆಂಡರ್ ಹಂತದಲ್ಲಿದ್ದು, ಸದರಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಯಾವಾಗ ಪೂರ್ಣಗೊಳಿಸಲಾಗುವುದು; | |
| ಇ) | ಈಗಾಗಲೇ ಪೂರ್ಣಗೊಳಿಸಿರುವ ಸ್ಮಾರ್ಟ್ ಸಿಟಿ ಯೋಜನೆಗಳು ಕಳಪೆ ಮಟ್ಟದಿಂದ ಕೂಡಿದ್ದು, ಮಳೆಗಾಲದಲ್ಲಿ ರಸ್ತೆಗಳು, ಚರಂಡಿಗಳು ಇತ್ಯಾದಿಗಳಲ್ಲಿ ರಸ್ತೆ ಡಾಂಬರೀಕರಣ ಕಿತ್ತು ಹೋಗಿದ್ದು, ಚರಂಡಿ ನೀರು ರಸ್ತೆ ಮೇಲೆ ಹರಿಯುತ್ತಿದ್ದು, ಇದರಿಂದಾಗಿ ಜನ ಸಾಮಾನ್ಯರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | • ಸ್ಮಾರ್ಟ್ ಸಿಟಿ ಕಾಮಗಾರಿಗಳ ಅನುಷ್ಠಾನದ ಸಂದರ್ಭದಲ್ಲಿ ಪರಿಮಾಣ ಹಾಗೂ ಗುಣಮಟ್ಟವನ್ನು ಪ್ರತಿ ಹಂತದಲ್ಲೂ ಪರೀಕ್ಷಿಸಿ, ಖಚಿತಪಡಿಸಿಕೊಂಡು, ದೃಢೀಕರಿಸಲು ಯೋಜನಾ ನಿರ್ವಹಣಾ ಸಮಾಲೋಚಕರನ್ನು (ಪಿಎಂಸಿ) ನೇಮಿಸಲಾಗಿದ್ದು, ಜೊತೆಗೆ ಸ್ಮಾರ್ಟ್ ಸಿಟಿ ಅಭಿಯಂತರರೂ ಸಹ ಅನುಷ್ಠಾನದ ಪ್ರತಿ ಹಂತದಲ್ಲಿ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಿ ತಾಂತ್ರಿಕವಾಗಿ ಖಚಿತಪಡಿಸಿಕೊಳ್ಳಲಾಗುತ್ತಿದೆ.<br>• ಆಯಾಯಾ ಕಾಮಗಾರಿಗಳಿಗೆ ಅನ್ವಯವಾಗುವಂತಹ India Standard(IS) National Building Code(NBC), Central Public Health & Environmental Engineering Organisation(CPHEOO) ಮಾನದಂಡಗಳ ಅನುಸಾರ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>• ಮುಂದುವರೆದು, ನಿರ್ದಿಷ್ಟ ದೂರು ಸ್ವೀಕೃತವಾದ ಸಂದರ್ಭಗಳಲ್ಲಿ ಮೂರನೇ ವ್ಯಕ್ತಿ ತಪಾಸಣೆಗಳ ಮೂಲಕ ಕಾಮಗಾರಿಗಳ ಗುಣಮಟ್ಟವನ್ನು ಖಚಿತ ಪಡಿಸಿಕೊಳ್ಳಲಾಗುತ್ತಿದೆ.<br>• ಸ್ಮಾರ್ಟ್ ಸಿಟಿ ವತಿಯಿಂದ ಅಭಿವೃದ್ಧಿ ಪಡಿಸಲಾದ ರಸ್ತೆಗಳು ಬಹುತೇಕ ಸಿಸಿ ರಸ್ತೆಗಳಾಗಿದ್ದು, ಅಭಿವೃದ್ಧಿ ಪಡಿಸಲಾದ ರಸ್ತೆಗಳಲ್ಲಿನ ಒಳಚರಂಡಿಗಳಲ್ಲಿ ಹೂಳು ಎತ್ತಿ ಕಾಲಕಾಲಕ್ಕೆ ಸ್ವಚ್ಛ ಮಾಡಲಾಗುತ್ತಿದೆ<br><br>ಮೇಲೆ ತಿಳಿಸಿರುವಂತೆ ಕಾಮಗಾರಿಗಳನ್ನು ಸರ್ಕಾರದ ಕಾಯ್ದೆ ಹಾಗೂ ನಿಯಮಗಳನುಸಾರ ಸಕ್ಷಮ ಪ್ರಾಧಿಕಾರಗಳ ಅನುಮೋದನೆಯೊಂದಿಗೆ ಸ್ಮಾರ್ಟ್‌ಸಿಟಿ ಮಾರ್ಗಸೂಚಿಯನ್ವಯ ವೈಜ್ಞಾನಿಕವಾಗಿ ಅನುಷ್ಠಾನಗೊಳಿಸಲಾಗಿರುತ್ತದೆ. |

| | | |
|---|---|---|
| ಈ) | ಈ ರೀತಿ ಕಳಪೆ ಕಾಮಗಾರಿಗಳನ್ನು ಕೈಗೊಂಡು ಯೋಜನೆಯು ಪೂರ್ಣಗೊಂಡಿರುವ ಬಗ್ಗೆ ಸಂಬಂಧಿಸಿದ ಕಛೇರಿಗಳಿಂದ Work Done Certificate ಪಡೆಯುತ್ತಿರುವ ಗುತ್ತಿಗೆದಾರರ ಮತ್ತು ಅಧಿಕಾರಿಗಳು ವಿರುದ್ಧ ಕೈಗೊಂಡಿರುವ ಕ್ರಮಗಳೇನು? | ಕಳಪೆ ಕಾಮಗಾರಿಗಳಿಗೆ Work Done Certificate ಪಡೆಯುತ್ತಿರುವ ಬಗ್ಗೆ ನಿರ್ದಿಷ್ಟ ದೂರುಗಳು ಸ್ವೀಕೃತವಾಗಿರುವುದಿಲ್ಲ. ಗುತ್ತಿಗೆ ಕರಾರಿನನ್ವಯ ಪೂರ್ಣಗೊಂಡಿರುವ ಕಾಮಗಾರಿಗಳಿಗೆ ಮಾತ್ರ ಸಕ್ಷಮ ಪ್ರಾಧಿಕಾರದಿಂದ Work Done Certificate ನೀಡಲಾಗುತ್ತಿದೆ. |

ಸಂಖ್ಯೆ: ನಅಇ 239 ಸಿಎಸ್ಎಸ್ 2024

**(ಬಿ.ಎಸ್.ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು